# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2022-23 ದಿನಾಂಕ :

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:03-09-2022 ರಂದು ವಾರ್ಡ್ ನಂ.196-ಅಂಜನಾಪುರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ಅಧಿಕಾರಿ/ಸಿಬ್ಬಂದಿಗಳ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ನರೇಂದ್ರ ಕುಮಾರ್.ಎ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ಕೃಷ್ಣಪ್ಪ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ರಾಕೇಶ್.ಕೆ.ಎಮ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 4 | ಶ್ರೀ ಅಕ್ಷಯ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 5 | ಶ್ರೀ ನರೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 6 | ಶ್ರೀ ಯೋಗೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 7 | ಶ್ರೀ ಸಚಿನ್ | ವಾರ್ಡ್ ಮಾರ್ಷಲ್ | ಹಾಜರಿರುತ್ತಾರೆ. |
| 8 | ಶ್ರೀ ಎಸ್.ಹರೀಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ. |
| 9 | ಶ್ರೀ ಕೃಷ್ಣ ನಾಯಕ್ | ಸಹಾಯಕ ಇಂಜಿನಿಯರ್ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) | ಗೈರು ಹಾಜರಿರುತ್ತಾರೆ. |
| 10 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ. |
| 11 | ಶ್ರೀ ಸದಾನಂದ | ಕಂದಾಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 12 | ಶ್ರೀ ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ |
| 13 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಗೈರು ಹಾಜರಿರುತ್ತಾರೆ. |
| 14 | ಶ್ರೀ ಪರಮೇಶ್.ಆರ್ | ಘನತ್ಯಾಜ್ಯ | ಹಾಜರಿರುತ್ತಾರೆ. |

### ಸಭೆಗೆ ಹಾಜರಾಗಿದ್ದವರ ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ/ಸಾರ್ವಜನಿಕರು ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಾತಿ |
|---|---|---|---|
| 1 | ಶ್ರೀ ವಿಜಯಸಿಂಹ | ಅಂಜನಾಪುರ ಗ್ರಾಮ RWA | ಹಾಜರಿರುತ್ತಾರೆ. |
| 2 | ಶ್ರೀ ಬಿ.ಆರ್.ದೇವಾಡಿಗ | ಶ್ರೀಸಿಧಿ ಬಡಾವಣೆ RWA | ಹಾಜರಿರುತ್ತಾರೆ. |
| 3 | ಶ್ರೀ ರಾಜಶೇಖರ್.ಹೆಚ್.ಎಸ್ | ಅಂಜನಾಪುರ ಗ್ರಾಮ RWA | ಹಾಜರಿರುತ್ತಾರೆ. |
| 4 | ಶ್ರೀ ಗೋವಿಂದರಾಜು | ಹರಿನಗರ RWA | ಹಾಜರಿರುತ್ತಾರೆ. |
| 5 | ಶ್ರೀ ರಸೂಲ್ | ಹರಿನಗರ RWA | ಹಾಜರಿರುತ್ತಾರೆ. |
| 6 | ಶ್ರೀ ಫಾರೋಖ್ | ಹರಿನಗರ RWA | ಹಾಜರಿರುತ್ತಾರೆ. |

ಮು.ತಿ.ನೋ 2ಕ್ಕೆ

Scanned with CamScanner

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.196ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ನರೇಂದ್ರ ಕುಮಾರ್.ಎ ರವರು ದಿ:03-09-2022 ರಂದು ಶನಿವಾರ 10.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ನರೇಂದ್ರ ಕುಮಾರ್.ಎ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ)

ವಾರ್ಡ್ ವ್ಯಾಪ್ತಿಯಲ್ಲಿನ ಒಳಚರಂಡಿ ಛೇಂಬರ್‌ಗಳಿಂದ ತೆಗೆದ ತ್ಯಾಜ್ಯ/ಮಣ್ಣನ್ನು ರಸ್ತೆಗಳ ಮೇಲೆ ಬಿಟ್ಟಿರುವ ಬಗ್ಗೆ ದೂರಿರುತ್ತಾರೆ. ಬಿ.ಡಿ.ಎ 5ನೇ ಬ್ಲಾಕ್ ರಸ್ತೆಗಳಲ್ಲಿ ಒಳಚರಂಡಿ ನೀರು ಛೇಂಬರ್‌ನಿಂದ ಹೊರಗೆ ಬಂದು ರಸ್ತೆಯ ಮೇಲೆ ಹರಿಯುತ್ತಿರುವ ಬಗ್ಗೆ ದೂರಿರುತ್ತಾರೆ. ಶ್ರೀನಿಧಿ ಬಡಾವಣೆ 2ನೇ ಅಡ್ಡ ರಸ್ತೆ ಇಂದ 15ನೇ ಅಡ್ಡ ರಸ್ತೆ ವರೆಗಿನ ಛೇಂಬರ್‌ಗಳನ್ನು ರಸ್ತೆಯ ಮಟ್ಟಕ್ಕೆ ಎತ್ತಿರಿಸಲು ಕೋರಿರುತ್ತಾರೆ. ಹರಿನಗರ ರಾಮಮಂದಿರಿ ರಸ್ತೆಯಲ್ಲಿ ಕಲ್ಲು ಬಂಡೆಯನ್ನು ಒಡೆದು ನೂತನವಾಗಿ ಅತ್ಯಗತ್ಯವಾಗಿದ್ದ ಒಳಚರಂಡಿ ಪೈಪನ್ನು ಅಳವಡಿಸಿರುವ ಬಗ್ಗೆ ಸಾರ್ವಜನಿಕರು ಶ್ಲಾಘನೆ ವ್ಯಕ್ತಪಡಿಸಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

2. ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ)

ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಾಯಲ್ ಪಾರ್ಕ್ ಬಡಾವಣೆಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿದ್ದರೂ ಈ ಭಾಗದ ರಸ್ತೆಗೆ ಮರು ಡಾಂಬರೀಕರಣ ಮಾಡಲು ಹಾಗೂ ಚರಂಡಿಗಳಲ್ಲಿ ಹೂಳು ತೆಗೆಯಲು ಮತ್ತು ಆವಲಹಳ್ಳಿ ಕೆರೆ ದಂಡೆಯ ಮೇಲೆ ನಿರ್ಮಿಸಿರುವ ಸಾರ್ವಜನಿಕ ಶೌಚಾಯಲವನ್ನು ತೆರೆಯಲು ಹಾಗೂ ಹರಿನಗರ ಮತ್ತು ಆವಲಹಳ್ಳಿ ಬಿ.ಡಿ.ಎ ಕ್ವಾಟ್ರಸ್ ಸುತ್ತ ಮುತ್ತಲಿನ ಪ್ರದೇಶದ ಚರಂಡಿಗಳಲ್ಲಿ ತುಂಬಿರುವ ಹೂಳು ತೆಗೆಯಲು ಕೋರಿರುತ್ತಾರೆ ಹರಿನಗರ ರಾಮಮಂದಿರ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಒಳಚರಂಡಿ ಕಾಮಗಾರಿ ಪೂರ್ಣಗೊಂಡಿದ್ದು ಈ ರಸ್ತೆಗೆ ಡಾಂಬರೀಕರಣ ಕಾಮಗಾರಿಯನ್ನು ಕೈಗೊಳ್ಳಲು ಕೊರಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಅಂಜನಾಪುರ ಉಪ ವಿಭಾಗ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

3. ಬೆಸ್ಕಾಂ:-

ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆಯಲ್ಲಿ ತೊಂದರೆಯಾಗುತ್ತಿದ್ದು, ಇದರ ಬಗ್ಗೆ ಸಭೆಯಲ್ಲಿ ಸದರಿ ಬೆಸ್ಕಾಂ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳು ಈ ದಿನದ ಸಭೆಗೂ ಗೈರುಹಾಜರಾಗಿರುತ್ತಾರೆ, ಇದರ ಬಗ್ಗೆ ಗಂಭೀರವಾಗಿ ಪರಿಗಣಿಸಿ ಸದರಿ ಸಮಸ್ಯೆಗಳ ಬಗ್ಗೆ ಮುಂದಿನ ಸಭೆಯಲ್ಲಿ ಸದರಿ ಸಂಬಂಧಪಟ್ಟ ಅಧಿಕಾರಿಗಳ ಮುಂದೆ ಚರ್ಚಿಸಲಾಗುವುದು

4. ಘನತ್ಯಾಜ್ಯ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿ ರಾಯಲ್ ಪಾರ್ಕ್ ಬಡಾವಣೆಯಲ್ಲಿ ಕಸದ ಸಂಗ್ರಹಣೆಯನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವ ಹಾಗೂ ಅಂಜನಾಪುರ ಕೆರೆಯ ಹಿಂಭಾಗದಲ್ಲಿ ಅನಾಮಿಕರು ಕಸದ ಚೀಲಗಳನ್ನು ಹಾಗೂ ಉಪಯೋಗಕ್ಕೆ ಬಾರದ ಹಾಸಿಗೆ ದಿಂಬುಗಳನ್ನು ಹಾಗೂ Plastic ಚೀಲಗಳನ್ನು ರಾತ್ರಿ ವೇಳೆಯಲ್ಲಿ ಎಸೆಯುತ್ತಿರುವುದು ಹಾಗೂ ಅಮೃತನಗರ ಮುಖ್ಯ ರಸ್ತೆ ಕೆರೆಯ ದಂಡೆ ಮೇಲೆ ಕಸ ಎಸೆಯುತ್ತಿರುತ್ತಾರೆ ಇದಕ್ಕೆ ಸಂಬಂಧಿಸಿದ ಗುತ್ತಿಗೆದಾರರ ಆಟೋ ಟಿಪ್ಪರ್‌ಗಳು, ಕಾಂಪ್ಯಾಕ್ಟರ್‌ಗಳು ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಇರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ತ್ವರಿತವಾಗಿ ಇದರ ಬಗ್ಗೆ ಗಮನಹರಿಸಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ತಿಳಿಸಲು ಅಧ್ಯಕ್ಷರಲ್ಲಿ ಕೋರಲಾಯಿತು.

–3–

Scanned with CamScanner

5. ನೋಡಲ್ ಅಧಿಕಾರಿ:-

ಆದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಪ್ರಮೋದ್ ಕುಮಾರ್ ರವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.196 ಅಂಜನಾಪುರ

-ಸಹಿ-
ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.196 ಅಂಜನಾಪುರ

Scanned with CamScanner